# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 247

2) ಸದಸ್ಯರ ಹೆಸರು : ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮನಿರ್ದೇಶನ ಹೊಂದಿದವರು)

3) ಉತ್ತರಿಸಬೇಕಾದ ದಿನಾಂಕ : 06-12-2023

4) ಉತ್ತರಿಸಬೇಕಾದ ಸಚಿವರು : ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ) | ವಿಜಯಪುರ ಜಿಲ್ಲೆಯಲ್ಲಿ ಹಲವಾರು ನದಿಗಳು ಹರಿಯುತ್ತಿದ್ದು, ಈ ಭಾಗದಲ್ಲಿ ಮೀನುಗಾರಿಕೆಗೆ ಉತ್ತೇಜನ ನೀಡಲು ಸರ್ಕಾರ ರೂಪಿಸಿರುವ ಯೋಜನೆಗಳಾವುವು: | ವಿಜಯಪುರ ಜಿಲ್ಲೆಯಲ್ಲಿ ಪ್ರಮುಖವಾಗಿ ಭೀಮಾ, ದೋಣಿ ಮತ್ತು ಕೃಷ್ಣಾ ನದಿಗಳಿದ್ದು, 142 ಕಿ.ಮೀ. ನದಿಭಾಗ ಇರುತ್ತದೆ. ಸದರಿ ನದಿ ಭಾಗದಲ್ಲಿ ಮೀನುಗಾರಿಕೆಯನ್ನು ನಡೆಸಲು ಮೀನುಗಾರರಿಗೆ ಪರವಾನಗಿಯನ್ನು ವಿತರಿಸಲಾಗುತ್ತಿದೆ ಹಾಗೂ ಮೀನುಗಾರರಿಗೆ ಮೀನು ಸಲಕರಣೆ, ಮೀನು ಬಲೆಗಳು ಹಾಗೂ ಮೀನು ಮಾರಾಟ ಮಾಡಲು ದ್ವಿಚಕ್ರ, ತ್ರಿಚಕ್ರ ಹಾಗೂ ನಾಲ್ಕು ಚಕ್ರ ವಾಹನ ಖರೀದಿಗಾಗಿ ಸಹಾಯಧನ ನೀಡಲಾಗುತ್ತಿದೆ. ನಿರ್ವಸತಿ ಮೀನುಗಾರರಿಗೆ ಮತ್ಸ್ಯಾಶ್ರಯ ಯೋಜನೆಯಡಿ ಮನೆಗಳನ್ನು ಮಂಜೂರು ಮಾಡಲಾಗುತ್ತಿದೆ ಹಾಗೂ ನದಿ ಭಾಗದ ಮೀನುಗಾರರಿಗೆ ರಾಷ್ಟ್ರೀಕೃತ ಬ್ಯಾಂಕುಗಳಿಂದ ಕೆ.ಸಿ.ಸಿ ಸಾಲ ಪಡೆಯಲು ಅವಕಾಶವಿದೆ. ಅಲ್ಲದೇ, ನದಿ ಭಾಗದಲ್ಲಿ ಮೀನು ಹಿಡುವಳಿ ಹೆಚ್ಚಿಸಲು ನಾರಾಯಣಪುರ ಮೀನುಮರಿ ಪಾಲನಾ ಕೇಂದ್ರದಿಂದ ನದಿ ಭಾಗದಲ್ಲಿ ಮೀನುಮರಿಗಳನ್ನು ಬಿತ್ತನೆ ಮಾಡಲಾಗಿದೆ.<br><br>**<u>ಮೀನುಗಾರಿಕೆಗೆ ನೀಡುತ್ತಿರುವ ಉತ್ತೇಜನ ಹಾಗೂ ಇತರೆ ಯೋಜನೆಗಳು:</u>**<br><br>**<u>I. ಜಿಲ್ಲಾ ಪಂಚಾಯತ ಯೋಜನೆಗಳ ವಿವರ:</u>**<br><br>1) ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ಸಹಾಯ ಯೋಜನೆ.<br>ಎ) ಮೀನುಗಾರರಿಗೆ ಉಚಿತ ಮೀನುಗಾರಿಕೆ ಸಲಕರಣೆ ಕಿಟ್ಟು ವಿತರಣೆ<br>ಬಿ) ಬಾವಿ ಮತ್ತು ಹೊಂಡ ಹೊಂದಿರುವ ರೈತರಿಗೆ ಉಚಿತವಾಗಿ 500 ಮೀನುಮರಿ ವಿತರಣೆ<br>ಸಿ) ಮೀನು ಬಲೆ ಖರೀದಿಗೆ ಸಹಾಯಧನ<br><br>2) ವಸ್ತುಪ್ರದರ್ಶನ ಮತ್ತು ತರಬೇತಿ ಯೋಜನೆಯಡಿ ಮೀನುಗಾರರಿಗೆ ಮೀನುಗಾರಿಕೆ ಕುರಿತು ಮಾಹಿತಿ ಕಾರ್ಯಾಗಾರ<br><br>3) ಮೀನು ಮಾರುಕಟ್ಟೆ ನಿರ್ಮಾಣ ಹಾಗೂ ಮೀನು ಮಾರಾಟಕ್ಕೆ ಸಹಾಯ ಯೋಜನೆಯಡಿ ಸೈಕಲ್, ದ್ವಿಚಕ್ರ ವಾಹನ, ತ್ರಿಚಕ್ರ ವಾಹನ ಹಾಗೂ ನಾಲ್ಕು ಚಕ್ರ ವಾಹನ ಖರೀದಿಸಲು ಸಹಾಯ ಧನ.<br><br>**<u>II. ರಾಜ್ಯ ವಲಯ ಯೋಜನೆಗಳು:</u>**<br><br>1) ಮೀನುಗಾರಿಕೆ ಸಲಕರಣೆ ಕಿಟ್ಟು ವಿತರಣೆ.<br>2) ಗ್ರಾಮ ಪಂಚಾಯತ್ ಕೆರೆಗಳಲ್ಲಿ ಉಚಿತ ಮೀನುಮರಿ ಬಿತ್ತನೆ. |

| | | |
|---|---|---|
| | | 3) ಮೀನುಮರಿ ಖರೀದಿಗಾಗಿ ಶೇ 50 ರಷ್ಟು ಸಹಾಯಧನ.<br>4) ಕೆರೆ ಅಂಚಿನಲ್ಲಿ ನಿರ್ಮಿಸಿರುವ ಮೀನುಮರಿ ಪಾಲನಾ ಕೊಳಗಳಲ್ಲಿ ಮೀನುಮರಿ ಪಾಲನೆ ಮಾಡಲು ಸಹಾಯಧನ.<br>5) ಜಲಾಶಯಗಳಲ್ಲಿ ಉತ್ತಮ ತಳಿಯ ಬಲಿತ ಮೀನುಮರಿ ಬಿತ್ತನೆ.<br><br>**<u>III. ಕೇಂದ್ರ ಪುರಸ್ಕೃತ ಯೋಜನೆ.</u>**<br><br>ಪ್ರಧಾನ ಮಂತ್ರಿ ಮತ್ಸ್ಯಸಂಪದ ಯೋಜನೆ. |
| ಆ) | ಕಳೆದ 3 ವರ್ಷಗಳಿಂದ ಮೀನುಗಾರಿಕೆಗೆ ನೀಡಿರುವ ಸೌಲತ್ತುಗಳೇನು; | ವಿಜಯಪುರ ಜಿಲ್ಲೆಯಾದ್ಯಂತ ಕಳೆದ ಮೂರು ವರ್ಷಗಳಿಂದ ಮೀನುಗಾರಿಕೆ ಅಭಿವೃದ್ಧಿಗೆ ಸರ್ಕಾರವು ಕೈಗೊಂಡಿರುವ ಯೋಜನೆಗಳ ಮಾಹಿತಿಗಳನ್ನು **<u>ಅನುಬಂಧ-1</u>** ರಲ್ಲಿ ನೀಡಲಾಗಿದೆ. |
| ಇ) | ಮೀನುಗಾರಿಕೆ ಅಭಿವೃದ್ಧಿಗಾಗಿ ಯಾವ ಹೊಸ ಯೋಜನೆ ಗಳನ್ನು ಸರ್ಕಾರ ರೂಪಿಸಲಾಗುತ್ತಿದೆ? (ವಿವರ ನೀಡುವುದು) | ರಾಜ್ಯದ ಮೀನುಗಾರಿಕೆ ಅಭಿವೃದ್ಧಿಗಾಗಿ ಕೆಲವು ಹೊಸ ಯೋಜನೆಗಳನ್ನು ಸರ್ಕಾರದಿಂದ ರೂಪಿಸಲಾಗಿದೆ. ವಿವರ ಕೆಳಗಿನಂತಿದೆ:<br><br>• ರಾಜ್ಯದಲ್ಲಿರುವ ಎಲ್ಲಾ ಜಲಸಂಪನ್ಮೂಲಗಳನ್ನು ಸಮರ್ಪಕವಾಗಿ ಉಪಯೋಗಿಸಿ ಹೆಚ್ಚು ಮೀನು ಉತ್ಪಾದಿಸುವ ದೃಷ್ಟಿಯಿಂದ ಹಾಗೂ ಮೀನುಗಾರರ ಕಲ್ಯಾಣಕ್ಕಾಗಿ ರಾಜ್ಯ ವಲಯ, ಜಿಲ್ಲಾ ವಲಯ ಹಾಗೂ ಕೇಂದ್ರ ವಲಯದ ಹಲವಾರು ಯೋಜನೆ ಮತ್ತು ಕಾರ್ಯಕ್ರಮಗಳನ್ನು ಇಲಾಖೆಯಿಂದ ಹಮ್ಮಿಕೊಳ್ಳಲಾಗಿದೆ.<br><br>• ರಾಜ್ಯದ ಗ್ರಾಮ ಪಂಚಾಯಿತಿಗಳಿಗೆ ಆದಾಯ ತರುವ ದೃಷ್ಟಿಯಿಂದ ಮತ್ತು ಗ್ರಾಮ ಪಂಚಾಯಿತಿಗಳನ್ನು ಬಲಪಡಿಸುವ ಉದ್ದೇಶದಿಂದ ಆಯ್ದ ಗ್ರಾಮ ಪಂಚಾಯಿತಿ ಕೆರೆಗಳಲ್ಲಿ ಪ್ರತೀ ಕೆರೆಯ ಜಲ ವಿಸ್ತೀರ್ಣಕ್ಕನುಗುಣವಾಗಿ ಗರಿಷ್ಠ ರೂ.10,000/- ಮೌಲ್ಯದ ಬಲಿತ ಬಿತ್ತನೆ ಮೀನುಮರಿಗಳನ್ನು ಉಚಿತವಾಗಿ ದಾಸ್ತಾನು ಮಾಡಿ ಮೀನು ಕೃಷಿಯನ್ನು ಅಭಿವೃದ್ಧಿಪಡಿಸಲಾಗುತ್ತಿದೆ.<br><br>• ಇವುಗಳಲ್ಲಿ ಕರಾವಳಿ ಮತ್ತು ಒಳನಾಡು ಪ್ರದೇಶಗಳೆರಡಕ್ಕೂ ಅನ್ವಯಿಸುವಂತೆ ಮೀನುಗಾರಿಕೆ ಅಭಿವೃದ್ಧಿಗಾಗಿ ಮೀನುಗಾರ ಮಹಿಳೆಯರ ಆರ್ಥಿಕ ಸ್ವಾವಲಂಬನೆ ಹಾಗೂ ವಹಿವಾಟು ವಿಸ್ತರಣೆಗೆ ನೆರವಾಗಲು ಬ್ಯಾಂಕುಗಳಲ್ಲಿ ಬಡ್ಡಿರಹಿತವಾಗಿ ನೀಡುವ ಸಾಲದ ಮಿತಿಯನ್ನು ರೂ. 50,000-00 ಗಳಿಂದ ರೂ. 3.00 ಲಕ್ಷಗಳಿಗೆ 2023-24 ನೇ ಸಾಲಿನಲ್ಲಿ ಹೆಚ್ಚಿಸಲಾಗಿದೆ. |

| | | |
|---|---|---|
| | | • ಕೇಂದ್ರ ಸರ್ಕಾರದ ಪ್ರಧಾನಮಂತ್ರಿ ಮತ್ಸ್ಯಸಂಪದ ಯೋಜನೆಯಡಿ ಮೀನುಗಾರಿಕೆಯ ಸರ್ವತೋಮುಖ ಅಭಿವೃದ್ಧಿಗಾಗಿ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಈ ಯೊಜನೆಯಡಿ ಒಳನಾಡು ಮೀನುಗಾರಿಕೆ ಮತ್ತು ಜಲಕೃಷಿ ಅಭಿವೃದ್ಧಿ, ಅಲಂಕಾರಿಕಾ ಮತ್ತು ಮನರಂಜನಾ ಮೀನುಗಾರಿಕೆ ಅಭಿವೃದ್ಧಿ, ನೂತನ ತಂತ್ರಜ್ಞಾನ ಅಳವಡಿಕೆ, ಹಿಡುವಳಿ ನಂತರದ ಶೀತಲ ಸರಪಳಿ, ಮೂಲ ಸೌಕರ್ಯ, ಮೀನು ಆಹಾರ ತಯಾರಿಕಾ ಘಟಕ, ಮೀನು ಮಾರುಕಟ್ಟೆಗಳು ಮತ್ತು ಮಾರಾಟ ಮೂಲ ಸೌಕರ್ಯಗಳಿಗೆ ಸಹಾಯಧನ ನೀಡಲಾಗುತ್ತಿದೆ. ಸದರಿ ಯೋಜನೆಯಡಿ ಸಾಮಾನ್ಯ ವರ್ಗದ ಫಲಾನುಭವಿಗಳಿಗೆ ಘಟಕ ವೆಚ್ಚದ ಶೇ.40 ರಷ್ಟು ಸಹಾಯಯಧನ ಹಾಗೂ ಮಹಿಳೆಯರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಘಟಕ ವೆಚ್ಚದ ಶೇ. 60 ರಷ್ಟು ಸಹಾಯಯಧನವನ್ನು ನೀಡಲಾಗುತ್ತಿದೆ. |

ಸಂಖ್ಯೆ: ಪಸಂಮೀ ಇ-197 ಮೀಇಯೋ 2023

(ಮಂಕಾಳ ಎಸ್. ವೈದ್ಯ)
ಮೀನುಗಾರಿಕೆ, ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು

120

## ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 237(247)ಕ್ಕೆ ಸಂಬಂಧಿಸಿದ ಮಾಹಿತಿ

## ಅನುಬಂಧ-1

(ಶ್ರೀ. ಲಕ್ಷ್ಮಣ್ ಸವದಿ)

| ಯೋಜನೆಗಳ ವಿವರ | 2020-21 | | 2021-22 | | 2022-23 | | 2023-24 | |
|---|---|---|---|---|---|---|---|---|
| | ಬಿಡುಗಡೆ ಯಾದ ಅನುದಾನ | ಫಲಾನುಭವಿಗಳ ಸಂಖ್ಯೆ | ಬಿಡುಗಡೆ ಯಾದ ಅನುದಾನ | ಫಲಾನುಭವಿಗಳ ಸಂಖ್ಯೆ | ಬಿಡುಗಡೆ ಯಾದ ಅನುದಾನ | ಫಲಾನುಭವಿಗಳ ಸಂಖ್ಯೆ | ಅನುದಾನ | ಫಲಾನುಭವಿಗಳ ಸಂಖ್ಯೆ |
| ಜಿಲ್ಲಾ ವಲಯ ಯೋಜನೆಗಳು: | | | | | | | | |
| ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ಸಹಾಯ ಮೀನುಮರಿ ಉತ್ಪಾದನೆ ಸಾಕಾಣಿಕೆ ಮತ್ತು ಹಂಚಿಕೆ.ವಿಶೇಷ ಘಟಕ ಯೋಜನೆ /ಗಿರಿಜನ ಉಪಯೋಜನೆ | 35.38 | 2090 | 47.75 | 3108 | 49.13 | 2969 | 54.00 | 700 |
| ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನು ಮಾರಾಟಕ್ಕೆ ಸಹಾಯ | 30.00 | 45 | 30.00 | 45 | 32.00 | 67 | 35.00 | 71 |
| ರಾಜ್ಯ ವಲಯ ಯೋಜನೆಗಳು | | | | | | | | |
| ಮೀನು ಮರಿ ಖರೀದಿಸಲು ನೆರವು | 0.54 | 10 | 0.60 | 12 | 0.20 | 1 | 0.50 | 3 |
| ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆಗಾಗಿ ಸಹಾಯಧನ | 5.50 | 55 | 7.00 | 70 | 5.00 | 50 | 3.50 | 35 |
| ಕೇಂದ್ರ ವಲಯ ಯೋಜನೆಗಳು | | | | | | | | |
| ಪ್ರಧಾನ ಮಂತ್ರಿ ಮತ್ಸ್ಯ ಸಂಪದ ಯೋಜನೆ | 133.95 | 41 | 500.35 | 84 | 41.06 | 12 | 0.45 | 1 |

ಷರಾ:2023-24 ನೇ ಸಾಲಿನ ಫಲಾನುಭವಿಗಳ ಆಯ್ಕೆ ಪ್ರಗತಿಯಲ್ಲಿದೆ.

ಮೀನುಗಾರಿಕೆ ನಿರ್ದೇಶಕರು